# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ,ಧಾರವಾಡ, ಕಾರವಾರ, ವಿಜಯಪುರ,ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:18/ಸಂಚಿಕೆ: 141 RNI NO.KAR KAN/2003/10452:No.G2/PMG/KA/NK/743/18-20 ಶುಕ್ರವಾರ ದಿನಾಂಕ: 08-05-2020 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com

## 2021ರ ಮಾರ್ಚ್‌ಗೆ ಎತ್ತಿನಹೊಳೆ ಕಾಮಗಾರಿ ಮೊದಲ ಹಂತಕ್ಕೆ ಚಾಲನೆ: ರಮೇಶ್ ಜಾರಕಿಹೊಳಿ

ಹಾಸನ.ಮೇ.7. ಜಲ ಸಂಪನ್ಮೂಲ ಸಚಿವರಾದ ರಮೇಶ್ ಜಾರಕಿಹೊಳೆ ಅವರು ಇಂದು ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನಲ್ಲಿ ನಡೆಯುತ್ತಿರುವ ಎತ್ತಿನ ಹೊಳೆ ಯೋಜನೆ ಕಾಮಗಾರಿ ಪರಿಶೀಲನೆ ನಡೆಸಿದರು.

ತಾಲ್ಲೂಕಿನ ಕುಂಬರಡಿ, ಕಾಡುಮನೆ ,ಹೆಬ್ಬನಳ್ಳಿ ಗ್ರಾಮಗಳಲ್ಲಿನ ಯೋಜನಾ ಸ್ಥಳಗಳಿಗೆ ಭೇಟಿ ನೀಡಿದ ಸಚಿವರು ಬಯಲು ಸೀಮೆಗೆ ನೀರುಣಿಸುವ ಎತ್ತಿನ ಹಳ್ಳ ಯೋಜನೆ ಕಾಮಗಾರಿಗಳನ್ನು ಚುರುಕು ಗೊಳಿಸುವಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು 2021 ರ ಮಾರ್ಚ್ ವೇಳೆಗೆ ಮೊದಲ ಹಂತದ ಕಾಮಗಾರಿ ಪೂರ್ಣ ಗೊಳಿಸಿ 37 ಕಿ ಮೀ ವರಗೆ ಪ್ರಾಯೋಗಿಕವಾಗಿ ನೀರು ಹರಿಸಲಾಗುವುದು ಎಂದರು.

ಕೋವಿದ್ 19 ಹಿನ್ನಲೆಯಲ್ಲಿ ಕಾಮಗಾರಿ ವಿಳಂವಾಗಿದೆ. ಇನ್ನು ಮಂದೆ ಕ್ಷಿಪ್ರವಾಗಿ ಕೆಲಸ ನಡೆಸಲಾಗುವುದು .ಆದಷ್ಟು ಬೇಗ ಬಯಲು ಸೀಮೆಗೆ ನೀರು ಹರಿಸಬೇಕೆಂಬುದು ಸರ್ಕಾರದ ಗುರಿಯಾಗಿದೆ ಎಂದರು.

ಯೋಜನೆಯಿಂದ ಬಾದಿತವಾಗಿರುವ ಸಕಲೇಶಪುರ ಆಲೂರು ತಾಲ್ಲೂಕು ಗಳಲ್ಲಿ ಈಗಾಗಾಲೆ ಮೂಲಭೂತ ಸೌಕರ್ಯ ಅಭಿವೃದ್ಧಿ ಗೆ ಗಮನ ಹರಿಸಲಾಗಿದ್ದು ರಸ್ತೆ ಕಾಮಗಾರಿಗಳನ್ನು ಕೈ ಗೊಳ್ಳಲಾಗಿದೆ ಎಂದರು.

ನೀರಿನ ವಿಚಾರದಲ್ಲಿ ಮಾತ್ರ ಯಾರೂ ಯಾವುದೇ ರಾಜಕೀಯ ಮಾಡಬಾರದು ಅನುದಾನ ಒದಗಿಸುವ ವಿಚಾರದಲ್ಲಿ ಸಣ್ಣಪುಟ್ಟ ಸಮಸ್ಯೆಗಳು ಎದುರಾಗಬಹುದು ಆದರೆ ಮುಂದಿನ ದಿನಗಳಲ್ಲಿ ಎಲ್ಲವನ್ನು ಬಗೆಹರಿಸುವುದಾಗಿ ಸಚಿವರು ಭರವಸೆ ನೀಡಿದರು. ಮುಂದಿನ ಮಾರ್ಚ್ ರೊಳಗೆ ಶೀಘ್ರದಲ್ಲೇ ಎತ್ತಿನಹೊಳೆಯಿಂದ ಮೊದಲನೇ ಹಂತದ ನೀರು ಹರಿಸುವ ಕಾರ್ಯಕ್ಕೆ ಚಾಲನೆ ನೀಡಲಾಗುವುದು ಎಂದು ಅವರು ಹೇಳಿದರು.ಕಳೆದ ಫೆಬ್ರವರಿಯಲ್ಲಿ ತಾವು ಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ್ದು, ಅಂದಿನಿಂದ ಎಲ್ಲಾ ಜಲಾಶಯಗಳಿಗೆ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿಯ ಅವಲೋಕನ ಮಾಡುತ್ತಿದ್ದೇನೆ. ಜೊತೆಗೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ರಾಜ್ಯದಲ್ಲಿ ನೀರಿನ ಸಮಸ್ಯೆ ಉಲ್ಬಣವಾಗದಂತೆ ಮಾಡಿಕೊಳ್ಳಲು ಸೂಚನೆ ನೀಡಿದ್ದೇನೆ ಎಂದರು.

ಎತ್ತಿನಹೊಳೆ ನೀರನ್ನು ಉತ್ತರ ಭಾಗಕ್ಕೆ ಕೊಂಡೊಯ್ಯುವ ಕುರಿತ ಪ್ರಶ್ನೆಗೆ ಉತ್ತರಿಸಿದ ಸಚಿವರು ರಾಜ್ಯದ ಎಲ್ಲಾ ಭಾಗದ ರೈತರು ನಮ್ಮವರೇ ಹಾಗಾಗಿ ಎಲ್ಲರ ಹಿತ ಕಾಪಾಡಬೇಕಾಗುತ್ತದೆ. ನೀರಿನ ಸಮಸ್ಯೆ ತಲೆದೋರದಂತೆ ಎಚ್ಚರ ವಹಿಸಲಾಗುವುದು ಎಂದರು.

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಗೆ ನೀರಾವರಿ ಬಗ್ಗೆ ಹೆಚ್ಚಿನ ಕಾಳಜಿ ಇರುವುದರಿಂದ ಎತ್ತಿನಹೊಳೆ ಯೋಜನೆ ಪೂರ್ಣಗೊಳ್ಳಲು ಯಾವುದೇ ರೀತಿಯ ಸಮಸ್ಯೆ ಆಗದು. ಈಗಾಗಲೇ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದ್ದು ಆದಷ್ಟು ಬೇಗ ರೈತರಿಗೆ ಪರಿಹಾರ ನೀಡುವ ಮೂಲಕ ನೀರಾವರಿಗೆ ಬೇಕಾಗುವಂತಹ ಎಲ್ಲಾ ರೀತಿಯ ಹಣದ ಸಮಸ್ಯೆಯನ್ನು ನಾವು ಬಗೆಹರಿಸುತ್ತೇವೆ. ಈಗಾಗಲೇ ಮುಖ್ಯಮಂತ್ರಿಗಳೊಂದಿಗೆ ವಿಶೇಷ ಸಭೆ ನಡೆಸಿದ್ದು ಯೋಜನೆ ಅನುಷ್ಠಾನಕ್ಕೆ ಮತ್ತಷ್ಟು ಹೆಚ್ಚಿನ ಒತ್ತು ನೀಡುತ್ತೇವೆ ಎಂದರು.

ಇಲಾಖಾ ಸರ್ವೆ ಪ್ರಕಾರ ಎತ್ತಿನಹೊಳೆಯಲ್ಲಿ ಮಳೆಗಾಲದಲ್ಲಿ ಅಂದಾಜು



24.1 ಟಿ.ಎಂ.ಸಿ ನೀರು ಲಭ್ಯವಿದೆ ಈಗಾಗಲೇ ಚೆಕ್ ಡ್ಯಾಮ್ ಗಳ ಕೆಲಸ ಮುಗಿಯುವ ಹಂತಕ್ಕೆ ತಲುಪಿದ್ದು 100 ಮೀಟರ್ ಎತ್ತರಕ್ಕೆ ನೀರನ್ನು ಹರಿಸಲಾಗುವುದು ಎಂದರು.ಕೊರೋನಾ ಪ್ರಕರಣದಿಂದ ಕೆಲವರು ಈಗಾಗಲೇ ಜಿಲ್ಲೆಯಿಂದ ತಮ್ಮ ಸ್ವಂತ ರಾಜ್ಯಕ್ಕೆ ತೆರಳಿದ್ದಾರೆ. ಆ ಕಾರಣಕ್ಕೆ ಯೋಜನೆ ವಿಳಂಬವಾಗಲು ಸಾಧ್ಯವಿಲ್ಲ ಪರ್ಯಾಯ ಮಾರ್ಗಗಳನ್ನು ಕಂಡುಕೊಂಡು ಯೋಜನೆಯನ್ನು ಮುಂದುವರೆಸಿ ಕಾಮಗಾರಿಯನ್ನು ಬೇಗನೆ ಪೂರ್ಣಗೊಳಿಸುವ ಕೆಲಸ ಮಾಡುತ್ತೇವೆ ಎಂದು ಸಚಿವರಾದ ರಮೇಶ್ ಜಾರಕಿಹೊಳಿ ಹೇಳಿದರು.

ಶಾಸಕರಾದ ಹೆಚ್.ಕೆ. ಕುಮಾರಸ್ವಾಮಿ ಹಾಗೂ ಕೆ.ಎಂ. ಶಿವಲಿಂಗೇಗೌಡ ಅವರು ಯೋಜನೆ ಬಗ್ಗೆ ಸಚಿವರಿಗೆ ಮಾಹಿತಿ ನೀಡಿ ತುರ್ತಾಗಿ ಕಾಮಗಾರಿಗಳು ಪೂರ್ಣವಾಗಬೇಕು. ಭೂಮಿ ಕಳೆದು ಕೊಂಡವರಿಗೆ ತ್ವರಿತವಾಗಿ ಪರಿಹಾರ ವಿತರಣೆಯಾಗಬೇಕು ಹಾಗೂ ಮೊದಲ ಹಂತದ ಯೋಜನೆ ಆದಷ್ಟು ಬೇಗ ಮುಗಿಯಬೇಕು ಎಂದು ಮನವಿ ಮಾಡಿದರು.

ಶಾಸಕರಾದ ಕೆ.ಎಸ್. ಲಿಂಗೇಶ್, ಮಾಜಿ ಶಾಸಕರಾದ ಹೆಚ್.ಎಂ. ವಿಶ್ವನಾಥ್ ಜಿಲ್ಲಾ ಪಂಚಾಯ್ತಿ ಅಧ್ಯಕ್ಷರಾದ ಶ್ವೇತ ದೇವರಾಜು, ಉಪ ವಿಭಾಗಾಧಿಕಾರಿ ಗಿರೀಶ್ ನಂದನ್, ಎತ್ತಿನಹೊಳೆ ಯೋಜನೆ ಕಾರ್ಯಪಾಲಕ ಅಭಿಯಂತರರಾದ ಜಯಣ್ಣ ಹಾಗೂ ತಹಸೀಲ್ದಾರ್ ಮಂಜುನಾಥ್ ಮತ್ತಿತರರು ಹಾಜರಿದ್ದರು.

## ಗ್ಯಾಸ್? ಸೋರಿಕೆ : 10 ಜನ ಮೃತರ ಕುಟುಂಬಕ್ಕೆ ತಲಾ 1 ಕೋಟಿ ರೂ ಪರಿಹಾರ 200ಕ್ಕೂ ಹೆಚ್ಚು ಜನರ ಆರೋಗ್ಯ ಸ್ಥಿತಿ

ಹೈದರಾಬಾದ್: ವಿಶಾಖಪಟ್ಟಣಂನ ಆರ್?ಆರ್? ವೆಂಕಟಾಪುರಂ ಎಂಬ ಗ್ರಾಮದ ಬಳಿ ಎಲ್?ಜಿ ಪಾಲಿಮರ್ಸ್ ಇಂಡಸ್ಟ್ರಿ ಎಂಬ ರಾಸಾಯನಿಕ ಕಾರ್ಖಾನೆಯಲ್ಲಿ ಗ್ಯಾಸ್? ಸೋರಿಕೆಯಾದ ಕಾರಣ ಉಸಿರಾಟಕ್ಕೆ ತೊಂದರೆಯಾಗಿ 10 ಜನ ಸಾವನ್ನಪ್ಪಿದ್ದಾರೆ. 200ಕ್ಕೂ ಹೆಚ್ಚು ಜನರ ಆರೋಗ್ಯ ಸ್ಥಿತಿ ಗಂಭೀರವಾಗಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ.

ಅನಿಲ ಸೋರೊಕೆ ದುರಂತ ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತರ ಕುಟುಂಬಕ್ಕೆ ತಲಾ 1 ಕೋಟಿ ರೂ ಪರಿಹಾರವನ್ನು ಸಿಎಂ ಜಗನ್ ಮೋಹನ್ ರೆಡ್ಡಿ ಘೋಷಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಗನ್ ರೆಡ್ಡಿ, ಆಸ್ಪತ್ರೆಯಲ್ಲಿ 2-3 ದಿನ ಉಳಿದವರಿಗೆ 5 ಲಕ್ಷ ರೂ. ಗಾಯಾಳುಗಳಿಗೆ 1 ಲಕ್ಷ ರೂ ಪರಿಹಾರ ನೀಡಲಾಗುವುದು. ಅನಿಲ ದುರಂತದಲ್ಲಿ ಸಾವನ್ನಪ್ಪಿದ ಕುಟುಂಬಕ್ಕೆ ತಲಾ 1 ಕೋಟಿ ರೂ ಪರಿಹಾರ ನೀಡಲಾಗುವುದು. ಗಾಯಾಳುಗಳ ಚಿಕಿತ್ಸಾ ವೆಚ್ಚವನ್ನು ಸರ್ಕಾರವೆ ಭರಿಸಲಿದೆ ಎಂದು ತಿಳಿಸಿದ್ದಾರೆ.



## ತುಂಗಭದ್ರಾ ಜಲಾಶಯದ ಮೇಲ್ಮಟ್ಟ ಕಾಲುವೆ ಕಾಮಗಾರಿ ಸ್ಥಳಕ್ಕೆ ಭೇಟಿ

ಕೊಪ್ಪಳ, ಮೇ.07: ನಗರದ ಶಾಸಕ ರಾಘವೇಂದ್ರ ಹಿಟ್ನಾಳ್ ಅವರು ಮುನಿರಾಬಾದ್‌ನ ತುಂಗಭದ್ರಾ ಜಲಾಶಯದ ಮೇಲ್ಮಟ್ಟ ಕಾಲುವೆ ಕ್ರಸ್ಟ್ ಗೇಟ್ ತೂಬು ದುರಸ್ತಿ ಕಾಮಗಾರಿ ಸ್ಥಳಕ್ಕೆ ಇಂದು (ಮೇ.07) ದಿಢೀರ್ ಭೇಟಿ ನೀಡಿ ಪರಿಶೀಲಿಸಿದರು.

ನಂತರ ಮಾತನಾಡಿದ ಅವರು ತುಂಗಭದ್ರಾ ಜಲಾಶಯಕ್ಕೆ ನೀರು ಸಂಗ್ರಹವಾಗುವಷ್ಟರಲ್ಲಿ ದುರಸ್ತಿ ಕಾಮಗಾರಿ ತ್ವರಿತ ರೀತಿಯಲ್ಲಿ ಪೂರ್ಣಗೊಳ್ಳಬೇಕು ಎಂದು ಸೂಚನೆ ನೀಡಿದರು.ಈ



ಸಂದರ್ಭದಲ್ಲಿ ಕೊಪ್ಪಳ ತಾಪಂ ಅಧ್ಯಕ್ಷ ಬಾಲಚಂದ್ರನ್, ಜಲಸಂಪನ್ಮೂಲ ಮುಖ್ಯ ಅಭಿಯಂತರ ಎಸ್.ಎಚ್. ಮಂಜಪ್ಪ, ಇ.ಇ.ಎಸ್. ಬಿ.ನಾಗಭೂಷಣ್, ಎ.ಇ.ಇ ಪುರುಷೋತ್ತಮ್ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಕೋವಿಡ್-19: ಮತ್ತೆ ಇಬ್ಬರು ಗುಣಮುಖ: ಆಸ್ಪತ್ರೆಯಿಂದೆ ಡಿಸ್ಚಾರ್ಜ್



ಬೆಳಗಾವಿ, ಮೇ 7 ; ಕೋವಿಡ್-19 ಸೋಂಕು ತಗುಲಿದ್ದವರ ಪೈಕಿ ಇಬ್ಬರು ಸಂಪೂರ್ಣ ಗುಣಮುಖರಾಗಿದ್ದು, ಇಂದು ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿರುತ್ತದೆ.ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ(ಬಿಮ್ಸ್) ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಹಿರೇಬಾಗೇವಾಡಿಯ ಪಿ-284 ಮತ್ತು ಕುಡಚಿಯ ಪಿ-300 ಇಬ್ಬರು ಗುಣಮುಖರಾಗಿ ಬಿಡುಗಡೆ ಹೊಂದಿರುತ್ತಾರೆ ಎಂದು ಬಿಮ್ಸ್ ಪ್ರಕಟಣೆಯಲ್ಲಿ ತಿಳಿಸಲಾಗಿದೆಜಿಲ್ಲೆಯಲ್ಲಿ ಇಂದಿನವರೆಗೆ ಒಟ್ಟು 74 ಜನರಲ್ಲಿ ಸೋಂಕು ಪತ್ತೆಯಾಗಿರುತ್ತದೆ. ಇದೀಗ ಒಟ್ಟಾರೆ 36 ಜನರು ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದು, ಒಬ್ಬರು ಮೃತಪಟ್ಟಿರುತ್ತಾರೆ.

## ಕಟ್ಟಡ-ವಾಣಿಜ್ಯ ಮಳಿಗೆಗಳಿಗೆ ತೆರಿಗೆಕಡಿಮೆಮಾಡಲು ಸಂಸದರಿಂದ ಮನವಿ

ಕೊಪ್ಪಳ ಮೇ. : ಕಟ್ಟಡ-ವಾಣಿಜ್ಯ ಮಳಿಗೆಗಳಿಗೆ ತೆರಿಗೆ ಕಡಿಮೆ ಮಾಡಲು ಕರ್ನಾಟಕ ಸರ್ಕಾರದ ಪೌರಾಡಳಿತ ಸಚಿವರಿಗೆ ಕೊಪ್ಪಳ ಸಂಸದ ಕರಡಿ ಸಂಗಣ್ಣ ಅವರು ಮನವಿ ಸಲ್ಲಿಸಿದ್ದಾರೆ. ಕೊಪ್ಪಳ ನಗರಸಭೆ ವತಿಯಿಂದ 2020-21ನೇ ಸಾಲಿನ ಕಟ್ಟಡಗಳಿಗೆ ಶೇ.20 ರಷ್ಟು ಮತ್ತು ವಾಣಿಜ್ಯ ಕಟ್ಟಡಗಳಿಗೆ ಶೇ.30 ರಷ್ಟು ತೆರಿಗೆಯನ್ನು ಹೆಚ್ಚು ಮಾಡಿ ಪಾವತಿಸಲು ಆದೇಶ ಮಾಡಿರುತ್ತಾ ರೆಂದು ಸಂಸದ ಕರಡಿ ಸಂಗಣ್ಣ ಅವರಿಗೆ ಕೊಪ್ಪಳ ನಾಗರಿಕ ಸಮಿತಿ ಅವರಿಂದ ಮನವಿ ಸಲ್ಲಿಸಿರುತ್ತಾರೆ.ಕೊಪ್ಪಳ ಭಾಗದಲ್ಲಿ ಉಂಟಾದ ಬರಗಾಲ ಮತ್ತು ವಿಶ್ವದಾದ್ಯಂತ ಉಲ್ಬಣಿಸಿರುವ ಕೋವಿಡ್-19 ಮಹಾಮಾರಿ ವೈರಸ್ ಸಂಕಷ್ಟಕ್ಕೆ ಸಿಲುಕಿ ರಾಷ್ಟ್ರದಲ್ಲಿ ಅಘೋಷಿತ ಲಾಕ್‌ಡೌನ್‌ನಿಂದ ನಗರದ ಸಾರ್ವಜನಿಕರಿಗೆ ಹಾಗೂ ವರ್ತಕರಿಗೆ ತುಂಬಾ ತೊಂದರೆಯಾಗಿದೆ. ಬಡವರು ಮತ್ತು ಮಧ್ಯಮ ವರ್ಗದವರು ತಮ್ಮ ಮನೆಗಳ ಹಾಲಿ ಇರುವ ವಾರ್ಷಿಕ ಆರ್ಥಿಕ ತೆರಿಗೆಯನ್ನು ಕಟ್ಟಲು ಸಹ ಆರ್ಥಿಕ ಮುಗ್ಗಟ್ಟನ್ನು ಅನುಭವಿಸುತ್ತಿದ್ದಾರೆ. ಇದರ ಜೊತೆಗೆ ಕೋವಿಡ್-19 ಪ್ರಯುಕ್ತ ನಗರದ ಎಲ್ಲಾ ವಾಣಿಜ್ಯ ಚಟುವಟಿಕೆಗಳು ಕಳೆದ 2ರಿಂದ3ತಿಂಗಳು ಸಂಪೂ ರ್ಣವಾಗಿ ಸ್ಥಗಿತಗೊಂ ಡಿದ್ದು, ಅಲ್ಲದೇ ಪುನರಾಂಭಿಸಲು ಅನಿರ್ದಿಷ್ಟಾವಧಿಯ ಬಂದ್ ಮುಂದುವರೆದಿದೆ.ಈಗಾಗಲೇ ಕೊರೋನಾದಿಂದಾಗಿ ಸಾರ್ವಜನಿಕರಿಗೆ ಆಗಿರುವ ಆರ್ಥಿಕ ಸಮಸ್ಯೆ ಯನ್ನು ಹೋಗಲಾಡಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಾರ್ವಜನಿಕರ ನೆರವಿಗೆ ಧಾವಿಸಿ ಹಲವಾರು ಆರ್ಥಿಕ ಪರಿಹಾ ರಗಳನ್ನು ಘೋಷಿಸುತ್ತಿರುವ ಹಿನ್ನೆಲೆಯಲ್ಲಿ ಕೊಪ್ಪಳ ನಗರಸಭೆಯವರು ಏಕಪಕ್ಷೀಯ ನಿರ್ಧಾರ ತೆಗೆದುಕೊಂಡು ತೆರಿಗೆ ಹೆಚ್ಚಿಗೆ ಮಾಡಿರುವುದು ಸೂಕ್ತವಾಗಿರುವುದಿಲ್ಲ ಮತ್ತು ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾಗಿರುತ್ತದೆ.ತಾವುಗಳು ಸಾರ್ವಜನಿಕರ, ಬಡವರ, ಮಧ್ಯಮ ವರ್ಗದವರ, ವ್ಯಾಪಾರಸ್ಥರ, ಕಟ್ಟಡಗಳ ಮಾಲೀಕರ, ವಾಣಿಜ್ಯ ಮಳಿಗೆಗಳ ಮತ್ತು ಹೋಟೆಲ್, ವಸತಿ ಗೃಹ, ಚಿತ್ರಮಂದಿರ, ಕಲ್ಯಾಣ ಮಂಟಪ ಮಾಲೀಕರ ಹಿತದೃಷ್ಟಿಯಿಂದ ಕೊಪ್ಪಳ ನಗರಸಭೆಯಿಂದ ಪ್ರಸಕ್ತ ವರ್ಷದಿಂದ ತೆರಿಗೆ ಹೆಚ್ಚಿಗೆ ಮಾಡಿರುವುದನ್ನು ರದ್ದುಗೊಳಿಸಿ ಹಿಂದಿನ ವರ್ಷದ ತೆರಿಗೆಯನ್ನೇ ಪಾವತಿಸಲು ನಗರಸಭೆಗೆ ಆದೇಶಿಸಬೇಕೆಂದು ಸಂಸದ ಕರಡಿ ಸಂಗಣ್ಣ ಅವರು ಮನವಿ ಮಾಡಿಕೊಂಡಿರುವುದಾಗಿ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

## ವಿಷಾನಿಲ ದುರಂತ-ಸಹಾಯವಾಣಿ ಪ್ರಾರಂಭಕ್ಕೆ ಡಿಸಿಎಂ ಸವದಿ ಕ್ರಮ

ಬೆಳಗಾವಿ, ಮೇ.7: ಆಂಧ್ರ ಪ್ರದೇಶದ ವಿಶಾಖಪಟ್ಟಣದ ಸಮೀಪ ವಿಷಾನಿಲ ಸೋರಿಕೆ ಪ್ರಕರಣದಿಂದ ಅಪಾರ ಸಾವುನೋವು ಉಂಟಾಗಿರುವುದು ತೀರಾ ದುರ್ದೈವದ ಘಟನೆಯಾಗಿದೆ. ಈ ದುರ್ಘಟನೆಯಿಂದ ನೊಂದವರಿಗೆ ನನ್ನ ಸಾಂತ್ವನಗಳು. ವಿಷಾನಿಲದ ಆಘಾತಕ್ಕೆ ಸಿಲುಕಿ ತೊಂದರೆಗೆ, ಅನಾರೋಗ್ಯಕ್ಕೆ ಈಡಾಗಿರುವವರು ಮತ್ತು ಗಾಯಗೊಂಡಿರುವವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ನಾನು ಹಾರೈಸುತ್ತೇನೆ.

ಈ ಘಟನೆ ಸಂಭವಿಸಿದ ಪ್ರದೇಶದಲ್ಲಿ ನಮ್ಮ ಕರ್ನಾಟಕ ರಾಜ್ಯದಿಂದ ತೆರಳಿದವರು ಯಾರಾದರೂ ಸಿಲುಕಿಕೊಂಡಿದ್ದಾರೆಯೇ ಎಂದು ಪತ್ತೆ ಮಾಡಲು ಮತ್ತು ಅವರಿಗೆ ತಕ್ಷಣಕ್ಕೆ ಸೂಕ್ತ ಮಾಹಿತಿ-ಸಹಾಯ ಒದಗಿಸುವ ಉದ್ದೇಶದಿಂದ ನನ್ನ ಉಸ್ತುವಾರಿ ಜಿಲ್ಲೆಯಾದ ರಾಯಚೂರು ಜಿಲ್ಲಾಡಳಿತದ ಮೂಲಕ ಸಹಾಯವಾಣಿ ಪ್ರಾರಂಭಿಸಲಾಗಿದೆ.

ಸಹಾಯವಾಣಿಯ ನಂಬರ್. 08532-228559 ಮತ್ತು 8660761866 ಆಗಿರುತ್ತದೆ. ಸಂತ್ರಸ್ತರು ಇದರ ಪ್ರಯೋಜನ ಪಡೆದುಕೊಳ್ಳಬಹುದಾಗಿದೆ ಎಂದು ಉಪ ಮುಖ್ಯಮಂತ್ರಿ ಹಾಗೂ ಸಾರಿಗೆ ಇಲಾಖೆ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮಣ ಸಂ. ಸವದಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತುಮಕೂರು ನಗರದಲ್ಲಿ ವೈನ್ ಶಾಪ್, ಅಂಗಡಿ ಮುಂಗಟ್ಟುಗಳನ್ನು ತೆರೆಯಲು ಅನುಮತಿ

ತುಮಕೂರುಮೇ.7: ತುಮಕೂರು ನಗರದ ಕಂಟೈನ್ಮೆಂಟ್ ವಲಯ ಹೊರತುಪಡಿಸಿ ತುಮಕೂರು ನಗರದಲ್ಲಿ ವೈನ್ ಶಾಪ್ ಸೇರಿದಂತೆ ಅಂಗಡಿ-ಮುಂಗಟ್ಟುಗಳನ್ನು ತೆರೆಯಲು ಷರತ್ತಿಗೊಳಪಟ್ಟು ಅನುಮತಿ ನೀಡಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಸಣ್ಣ ನೀರಾವರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಜೆ.ಸಿ.ಮಾಧುಸ್ವಾಮಿ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ನಡೆದ ತುಮಕೂರು ನಗರದಲ್ಲಿ ಕೋವಿಡ್-19 ವೈರಾಣು ನಿಯಂತ್ರಣ ಮತ್ತು ಸಡಿಲಿಕೆ ಕುರಿತು ಕರೆಯಲಾಗಿದ್ದ ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ನಗರದ ಶಾಸಕರಾದ ಜ್ಯೋತಿಗಣೇಶ್ ಹಾಗೂ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಂದ ಸಡಿಲಿಕೆ ಕುರಿತು ಸಮಗ್ರ ಮಾಹಿತಿ ಪಡೆದು ಮಾತನಾಡಿದರು. ಸಾಮಾಜಿಕ ಅಂತರ, ಕಡ್ಡಾಯವಾಗಿ ಮಾಸ್ಕ್ ಧರಿಸುವುದು ಮತ್ತು ಜನಜಂಗುಳಿ ನಿಯಂತ್ರಣದೊಂದಿಗೆ ಅಂಗಡಿಗಳ ಮಾಲೀಕರುಗಳು ಮತ್ತು ವರ್ತಕರುಗಳು ತಮ್ಮ ಸ್ವಯಂ ಜವಾಬ್ದಾರಿಯಿಂದ ಅಂಗಡಿಗಳನ್ನು ತೆರೆಯಲು ಅವರು ಸೂಚನೆ ನೀಡಿದರು.

ತುಮಕೂರು ನಗರದಲ್ಲಿ ವೈನ್‌ಶಾಪ್‌ಗಳು ಹಾಗೂ ಎಂಎಸ್‌ಐಎಲ್ ಅಂಗಡಿಗಳು ಬೆಳಿಗ್ಗೆ 9 ಗಂಟೆಯಿಂದ ಸಂಜೆ 7ರವರೆಗೆ ತೆರೆಯಲು



ಅನುಮತಿ ನೀಡಿದ್ದು, ಸಾಮಾಜಿಕ ಅಂತರ, ಮಾಸ್ಕ್ ಧರಿಸುವಿಕೆ ಹಾಗೂ ಸಿಸಿ ಟಿವಿ ಅಳವಡಿಸಬೇಕು. ಈ ಬಗ್ಗೆ ಕ್ರಮ ವಹಿಸುವಂತೆ ಜಿಲ್ಲಾ ಅಬಕಾರಿ ಅಧಿಕಾರಿಗಳಿಗೆ ಸೂಚಿಸಿದರು.

ಕಂಟೈನ್ಮೆಂಟ್ ಝೋನ್ ಹೊರತುಪಡಿಸಿ ಅಂಗಡಿಗಳನ್ನು ಬೆಳಿಗ್ಗೆ 10 ಗಂಟೆಯಿಂದ ರಾತ್ರಿ 7 ಗಂಟೆಯವರೆಗೆ ತೆರೆಯಲು ಅನುಮತಿಸಲಾಗಿದೆ. ತುಮಕೂರು ನಗರಕ್ಕೆ ನೇರವಾಗಿ ಸಂಪರ್ಕಿಸುವ ರಸ್ತೆಗಳ ಮೂಲಕ ಬರುವ ಎಲ್ಲಾ ವಾಹನಗಳನ್ನು ತಪಾಸಣೆಗೊಳಪಡಿಸಲು ಅಗತ್ಯವಿರುವ ಕಡೆ ಚೆಕ್‌ಪೋಸ್ಟ್‌ಗಳನ್ನು ಕೂಡಲೇ ಸ್ಥಾಪಿಸಿ ನಗರಕ್ಕೆ ಬರುವ ಜನರನ್ನು ತಪಾಸಣೆಗೊಳಪಡಿಸುವಂತೆ ಸಚಿವರು ಪೊಲೀಸ್ ವರಿಷ್ಠಾಧಿಕಾರಿಗಳಿಗೆ ತಿಳಿಸಿದರು. ಅಂಗಡಿಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸುವುದು ಕಡ್ಡಾಯವಾಗಿದೆ, ಸ್ಯಾನಟೈಸರ್ ಇಡುವುದು, ಬ್ಲೀಚಿಂಗ್ ಪೌಡರ್ ಮತ್ತು ಲೈಜಾಲ್ ಬಳಸಿ ಶೌಚಾಲಯುವನ್ನು ಸ್ವಚ್ಛವಾಗಿಡುವುದು, ಸಿಬ್ಬಂದಿವರ್ಗದವರು ಗ್ರಾಹಕರು ಕಡ್ಡಾಯವಾಗಿ ಮಾಸ್ಕ್ ಧರಿಸುವುದು ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಮುಂಜಾಗ್ರತಾ ಕ್ರಮ ವಹಿಸಬೇಕು ಮತ್ತು ಗ್ರಾಹಕರ ಮಾಹಿತಿಯನ್ನು ಪಡೆಯಬೇಕು ಎಂದು ಸಚಿವರು ವರ್ತಕರುಗಳಿಗೆ ಸೂಚನೆ ನೀಡಿದರು. ಜಿಮ್, ಶಾಪಿಂಗ್ ಕಾಂಪ್ಲೆಕ್ಸ್, ಸ್ವಿಮ್ಮಿಂಗ್ ಫೂಲ್ ಹಾಗೂ ಧಾರ್ಮಿಕ ಸ್ಥಳಗಳನ್ನು ತೆರೆಯಲು ಅವಕಾಶವಿರುವುದಿಲ್ಲ. ಸರ್ಕಾರದ ಆದೇಶ ಮತ್ತು ಜಿಲ್ಲಾಡಳಿತ ನೀಡುವ ಸೂಚನೆಗಳನ್ನು ವರ್ತಕರು ಪಾಲಿಸಬೇಕು. ಅಂಗಡಿಗಳಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳದೆ ಕಾನೂನು ಪಾಲಿಸದೇ ಇರುವ ಅಂಗಡಿಗಳ ಮೇಲೆ ನಿಗಾವಹಿಸಲು 6 ಮೊಬೈಲ್ ಸ್ಕ್ವಾಡ್‌ಗಳನ್ನು ರಚಿಸಲಾಗಿದ್ದು, ಅವು ಗಸ್ತಿನಲ್ಲಿರುತ್ತವೆ. ಸೂಚನೆ ಉಲ್ಲಂಘನೆ ಕಂಡುಬಂದ ಅಂಗಡಿಗಳ ಮಾಲೀಕರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುವುದು ಹಾಗೂ ಅಂತಹ ವ್ಯಾಪಾರ ಮಳಿಗೆಗಳನ್ನು ಮುಚ್ಚಿಸಲಾಗುವುದು ಎಂದು ಸಚಿವರು ಎಚ್ಚರಿಕೆ ನೀಡಿದರು. ಕೇಂದ್ರ ಸರ್ಕಾರದ ಆದೇಶದಂತೆ ಕೋವಿಡ್-19 ನಿಯಂತ್ರಣಕ್ಕಾಗಿ ಮೇ 17ರವರೆಗೆ ಜಿಲ್ಲೆಯಲ್ಲಿ 144 ಸೆಕ್ಷನ್ ಜಾರಿಯಲ್ಲಿ ಇರುತ್ತದೆ ಎಂದು ಜಿಲ್ಲಾಧಿಕಾರಿ ಡಾ: ಕೆ.ರಾಕೇಶ್ ಕುಮಾರ್ ಅವರು ಸಭೆಗೆ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ: ಕೊನ ವಂಶಿಕೃಷ್ಣ, ಜಿ.ಪಂ. ಸಿಇಓ ಶುಭಾ ಕಲ್ಯಾಣ್, ಅಪರ ಜಿಲ್ಲಾಧಿಕಾರಿ ಕೆ.ಚೆನ್ನಬಸಪ್ಪ, ಡಿ.ಹೆಚ್.ಓ. ಡಾ: ಚಂದ್ರಿಕಾ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ: ವೀರಭದ್ರಯ್ಯ, ಛೇಂಬರ್ ಆಫ್ ಕಾಮರ್ಸ್‌ನ ಅಧ್ಯಕ್ಷರಾದ ಚಂದ್ರಶೇಖರ್, ಅಂಗಡಿಗಳ ಮಾಲೀಕರು, ವರ್ತಕರ ಸಂಘದ ಪ್ರತಿನಿಧಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಿದ್ದರು.